**ಆಯುಕ್ತರು, ಸಮಾಜ ಕಲ್ಯಾಣ ಇಲಾಖೆ, ಕರ್ನಾಟಕ ಸರ್ಕಾರ, ಬೆಂಗಳೂರು ಇವರ ನಡವಳಿಗಳು**

ವಿಷಯ: 2018-19ನೇ ಸಾಲಿನಲ್ಲಿ ಗ್ರಾಮಾಂತರ ಪ್ರದೇಶದಲ್ಲಿ ಪರಿಶಿಷ್ಟ ಜಾತಿ ಜನಾಂಗದವರಿಗಾಗಿ ಸ್ಮಶಾನ ಭೂಮಿ ಖರೀದಿ ಹಾಗೂ ಸ್ಮಶಾನ ಸ್ಥಳದಲ್ಲಿ ಇತರೆ ಸೌಲಭ್ಯಗಳನ್ನು ಒದಗಿಸುವ ಕಾರ್ಯಕ್ರಮವನ್ನು ಅನುಷ್ಠಾನಗೊಳಸಲು ಅನುದಾನ ಬಿಡುಗಡೆ ಮಾಡುವ ಕುರಿತು.

ಉಲ್ಲೇಖ:
1. ಸರ್ಕಾರದ ಆದೇಶ ಸಂಖ್ಯೆ: ಸಕಇ 322 ಪಕಯೋ 2015 ದಿನಾಂಕ: 19-10-2015.
2. ಸರ್ಕಾರದ ಆದೇಶ ಸಂಖ್ಯೆ: ಸಕಇ 215 ಎಸ್‌ಎಲ್‌ಪಿ 2018 ದಿನಾಂಕ: 30-01-2019.
3. ಈ ಕಛೇರಿ ಆದೇಶ ಸಂಖ್ಯೆ: ಸಕನಿ: ಸಿಹೆಚ್‌ಬಿ: ಸಿಆರ್-15: 2018-19 ದಿನಾಂಕ: 04-19-2019.

******

**ಪ್ರಸ್ತಾವನೆ** :

ಗ್ರಾಮಾಂತರ ಪ್ರದೇಶಗಳಲ್ಲಿ ಪರಿಶಿಷ್ಟ ಜಾತಿ ಜನಾಂಗದವರ ಸ್ಮಶಾನಭೂಮಿಗೆ ಮೂಲಭೂತ ಸೌಲಭ್ಯಗಳನ್ನು ಒದಗಿಸುವ ಸಂಬಂಧವಾಗಿ ಉಲ್ಲೇಖ-1ರ ಸರ್ಕಾರದ ಆದೇಶದಲ್ಲಿ ಮಾರ್ಗಸೂಚಿಗಳನ್ನು ರಚಿಸಲಾಗಿರುತ್ತದೆ.

2018-19ನೇ ಸಾಲಿನಲ್ಲಿ ಗ್ರಾಮಾಂತರ ಪ್ರದೇಶದಲ್ಲಿ ಪರಿಶಿಷ್ಟ ಜಾತಿ ಜನಂಗದವರಿಗಾಗಿ ಸ್ಮಶಾನ ಭೂಮಿ ಖರೀದಿ ಹಾಗೂ ಸ್ಮಶಾನದ ಸ್ಥಳದಲ್ಲಿ ಇನ್ನಿತರೆ ಸೌಲಭ್ಯಗಳನ್ನು ಒದಗಿಸುವ ಕಾರ್ಯಕ್ರಮಕ್ಕಾಗಿ ಲೆಕ್ಕ ಶೀರ್ಷಿಕೆ: 4225-01-190-0-06 (059) ರಡಿ ರೂ.500.00 ಲಕ್ಷಗಳನ್ನು ನಿಗಧಿಪಡಿಸಿ ಎರಡನೇ ಕಂತಾಗಿ ರೂ.300.00 ಲಕ್ಷಗಳನ್ನು ಉಲ್ಲೇಖ-2ರಲ್ಲಿ ಬಿಡುಗಡೆ ಮಾಡಲಾಗಿರುತ್ತದೆ.

ಮೇಲ್ಕಂಡಂತೆ ಬಿಡುಗಡೆ ಮಾಡಲಾದ ರೂ.300.00 ಲಕ್ಷಗಳನ್ನು ಉಲ್ಲೇಖ-3ರಲ್ಲಿ ವ್ಯವಸ್ಥಾಪಕ ನಿರ್ದೇಶಕರು, ಡಾ:ಬಿ.ಆರ್.ಅಂಬೇಡ್ಕರ್ ಅಭಿವೃದ್ಧಿ ನಿಯಮ ನಿಗಮಿತ, ಬೆಂಗಳೂರು ರವರಿಗೆ ಮರು ಬಿಡುಗಡೆ ಮಾಡಲಾಗಿರುತ್ತದೆ. ಸದರಿ ಅನುದಾನವನ್ನು ಪ್ರಸ್ತುತ ಜಿಲ್ಲೆಗಳಿಂದ ಸ್ವೀಕರಿಸಲಾದ ಪ್ರಸ್ತಾವನೆಗಳಿಗೆ ಅನುಗುಣವಾಗಿ ಬೆಂಗಳೂರು ನಗರ, ಮಂಡ್ಯ, ಬೆಂಗಳೂರು ಗ್ರಾಮಾಂತರ, ರಾಮನಗರ, ದಾವಣಗೆರೆ, ಚಿಕ್ಕಬಳ್ಳಾಪುರ, ಶಿವಮೊಗ್ಗ, ಚಾಮರಾಜನಗರ, ಗದಗ ಮತ್ತು ದಕ್ಷಿಣ ಕನ್ನಡ ಜಿಲ್ಲೆಗಳಿಗೆ ಹಂಚಿಕೆ ಮಾಡಿ ಬಿಡುಗಡೆ ಮಾಡಲು ಉದ್ದೇಶಿಸಿರುವುದರಿಂದ ಈ ಕೆಳಕಂಡ ಅದೇಶ.

**ಸಂಖ್ಯೆ: ಸಕನಿ/ಸ್ಮ.ಭೂ/ಸಿಆರ್-11/2018-19**

**ದಿನಾಂಕ:06-03-2019.**

**ಆ ದೇ ಶ**

ಪ್ರಸ್ತಾವನೆಯಲ್ಲಿ ವಿವರಿಸಿರುವ ಅಂಶಗಳನ್ನು ಅನುಸರಿಸಿ, 2018-19ನೇ ಸಾಲಿನಲ್ಲಿ ಗ್ರಾಮಾಂತರ ಪ್ರದೇಶದಲ್ಲಿ ಪರಿಶಿಷ್ಟ ಜಾತಿ ಜನಾಂಗದವರಿಗಾಗಿ ಸ್ಮಶಾನ ಭೂಮಿ ಖರೀದಿ ಹಾಗೂ ಸ್ಮಶಾನ ಸ್ಥಳದಲ್ಲಿ ಇತರೆ

Scanned by CamScanner

ಸೌಲಭ್ಯಗಳನ್ನು ಒದಗಿಸುವ ಸಂಬಂಧವಾಗಿ ರೂ.300.00 ಲಕ್ಷಗಳನ್ನು ಈ ಕೆಳಕಂಡಂತೆ ಹಂಚಿಕೆ ಮಾಡಿ ಸಂಬಂಧಪಟ್ಟ ಜಿಲ್ಲೆಗಳ ಜಿಲ್ಲಾಧಿಕಾರಿಗಳಿಗೆ ಅಗತ್ಯ ಷರತ್ತುಗಳಿಗೆ ಒಳಪಡಿಸಿ ಬಿಡುಗಡೆ ಮಾಡಿ ಆದೇಶಿಸಿದೆ.

(ರೂ.ಲಕ್ಷಗಳಲ್ಲಿ)

| ಕ್ರ. ಸಂ | ಜಿಲ್ಲೆ | ಹಂಚಿಕೆ ಮಾಡಿ ಬಿಡುಗಡೆ ಮಾಡಲಾದ ಅನುದಾನ |
|---|---|---|
| 1. | ಬೆಂಗಳೂರು ನಗರ | 50.00 |
| 2. | ಮಂಡ್ಯ | 50.00 |
| 3. | ಬೆಂಗಳೂರು ಗ್ರಾಮಾಂತರ | 55.00 |
| 4. | ರಾಮನಗರ | 15.00 |
| 5. | ದಾವಣಗೆರೆ | 45.00 |
| 6. | ಚಿಕ್ಕಬಳ್ಳಾಪುರ | 45.00 |
| 7. | ಶಿವಮೊಗ್ಗ | 10.00 |
| 8. | ಚಾಮರಾಜನಗರ | 5.00 |
| 9. | ಗದಗ | 15.00 |
| 10. | ದಕ್ಷಿಣ ಕನ್ನಡ | 10.00 |
| | **ಒಟ್ಟು** | **300.00** |

**ಷರತ್ತುಗಳು:**

1. ಕರ್ನಾಟಕ ಸಾರ್ವಜನಿಕ ಸಂಗ್ರಹಣೆಗಳಲ್ಲಿ ಪಾರದರ್ಶಕತೆ ಅಧಿನಿಯಮ 1999 ರನ್ವಯ ಕಾಮಗಾರಿಗಳನ್ನು ಕೈಗೊಳ್ಳುವುದು.
2. ಜಿಲ್ಲೆಗಳಿಗೆ ಹಂಚಿಕೆ ಮಾಡಿ ಬಿಡುಗಡೆ ಮಾಡಲಾಗಿರುವ ಅನುದಾನದಲ್ಲಿ ಚಾಲ್ತಿಯಲ್ಲಿರುವ ಮಾರ್ಗಸೂಚಿಗಳನ್ವಯ ಸ್ಮಶಾನ ಭೂಮಿಗೆ ಅಗತ್ಯ ಮೂಲಭೂತ ಸೌಲಭ್ಯಗಳನ್ನು ಒದಗಿಸುವುದು.
3. ಮೇಲ್ಕಂಡಂತೆ ಬಿಡುಗಡೆ ಮಾಡಲಾಗಿರುವ ಅನುದಾನದಲ್ಲಿ ಸಂಬಂಧಪಟ್ಟ ಜಿಲ್ಲೆಗಳ ಜಿಲ್ಲಾಧಿಕಾರಿಗಳ ಅಧ್ಯಕ್ಷತೆಯಲ್ಲಿ ಕಾಮಗಾರಿಗಳನ್ನು ಆಯ್ಕೆ ಮಾಡಿ, ಈ ಸಂಬಂಧವಾಗಿ ಸರ್ಕಾರಿ ನಿರ್ಮಾಣ ಏಜೆನ್ಸಿಗಳ ವತಿಯಿಂದ ಸಿದ್ಧಪಡಿಸಲಾಗಿರುವ ಅಂದಾಜು ಪಟ್ಟಿಗಳಿಗೆ ಜಿಲ್ಲಾಧಿಕಾರಿಗಳಿಗೆ ಪ್ರದ್ದತ್ತವಾಗಿರುವ ಅರ್ಥಿಕ ಅಧಿಕಾರದನ್ವಯ ಆಡಳಿತಾತ್ಮಕ ಅನುಮೋದನೆ ಪಡೆದು ಕಾಮಗಾರಿಗಳನ್ನು ಕೈಗೊಳ್ಳತಕ್ಕದ್ದು.
4. ಹಂಚಿಕೆ ಮಾಡಿ ಬಿಡುಗಡೆ ಮಾಡಿರುವ ಮೊತ್ತದ ಕಾಮಗಾರಿಯನ್ನು ಕೈಗೊಂಡು ಪೂರ್ಣಗೊಳಿಸತಕ್ಕದ್ದು.
5. ಪ್ರಸ್ತಾಪಿತ ಸ್ಮಶಾನ ಭೂಮಿ ಪರಿಶಿಷ್ಟ ಜಾತಿ ಜನಾಂಗದವರಿಗೆ ಮೀಸಲಿರಿಸಿರುವ ಸ್ಮಶಾನ ಭೂಮಿಯೇ ಎಂದು ಖಾತ್ರಿ ಪಡಿಸುವುದು ಸಂಬಂಧಪಟ್ಟ ಜಿಲ್ಲೆಗಳಲ್ಲಿನ ಸಮಾಜ ಕಲ್ಯಾಣ ಇಲಾಖೆ ಜಂಟಿ/ಉಪ ನಿರ್ದೇಶಕರುಗಳ ಜವಾಬ್ದಾರಿಯಾಗಿರುತ್ತದೆ.

Scanned by CamScanner

6. ಪ್ರಸ್ತಾಪಿತ ಸ್ಮಶಾನ ಭೂಮಿಯ ಕಂದಾಯ ದಾಖಲೆಗಳನ್ನು ಪಡೆಯುವುದು ಅನುದಾನವನ್ನು ಬಿಡುಗಡೆ ಮಾಡುವುದು.

7. ಸರ್ಕಾರದ ಸುತ್ತೋಲೆ ಸಂಖ್ಯೆ: ಸಕಇ 456 ಮೊದೇಶಾ 2018 ದಿನಾಂಕ:11-02-2019 ರನ್ವಯ ಕಾಮಗಾರಿಗಳನ್ನು ನಿರ್ಮಿತಿ ಕೇಂದ್ರಗಳಿಗೆ ವಹಿಸದೇ ಕೆ.ಆರ್.ಐ.ಡಿ.ಎಲ್ ವತಿಯಿಂದ ಹಾಗೂ ನಿಯಮಾನುಸಾರ ಟೆಂಡರ್ ಕರೆದು ಕಾಮಗಾರಿಗಳನ್ನು ಕೈಗೊಳ್ಳುವುದು.

ಮೇಲ್ಕಂಡಂತೆ ಬಿಡುಗಡೆಗೊಳಿಸಲಾಗಿರುವ ರೂ.300.00 ಲಕ್ಷಗಳನ್ನು ಸಂಬಂಧಪಟ್ಟ ಜಿಲ್ಲೆಗಳ ಜಿಲ್ಲಾಧಿಕಾರಿಗಳು ಮತ್ತು ಜಂಟಿ/ಉಪ ನಿರ್ದೇಶಕರು, ಸಮಾಜ ಕಲ್ಯಾಣ ಇಲಾಖೆ ರವರುಗಳ ಜಂಟಿ ಖಾತೆಗೆ ಆರ್.ಟಿ.ಜಿ.ಎಸ್ ಮುಖಾಂತರ ವರ್ಗಾಹಿಸಲು ವ್ಯವಸ್ಥಾಪಕ ನಿರ್ದೇಶಕರು, ಡಾ|| ಬಿ.ಆರ್.ಅಂಬೇಡ್ಕರ್ ಅಭಿವೃದ್ಧಿ ನಿಗಮ, ಬೆಂಗಳೂರು ರವರಿಗೆ ಆದೇಶಿಸಿದೆ.

| SL. NO | DISTRICT NAME | BANK | BRANCH | ACCOUNT NO. | IFSC CODE | ವರ್ಗಾವಣೆ ಮಾಡುತ್ತಿರುವ ಅನುದಾನ (ರೂ.ಲಕ್ಷಗಳಲ್ಲಿ) |
|---|---|---|---|---|---|---|
| 1. | BANGALORE URBAN | SBM | L . C. ROAD | 64089370278 | SBMY0040016 | 50.00 |
| 2. | MANDYA | SBM | MANDYA | 64089370948 | SBMY0040035 | 50.00 |
| 3. | BANGLORE RURAL | SBM | Dr. B.R. Ambedkar veedhi | 64089370223 | SBMY0040022 | 55.00 |
| 4. | RAMNAGAR | SBM | RAMNAGAR | 64089371034 | SBMY0040031 | 15.00 |
| 5. | DAVANAGERE | SBM | DAVANAGERE | 64089370574 | SBMY0040361 | 45.00 |
| 6. | CHIKKABALLAPUR | SBM | CHIKKABALLAPUR | 64089370449 | SBMY0040082 | 45.00 |
| 7. | SHIVMOGA | SBM | SHIMOGA | 64089371103 | SBMY0040132 | 10.00 |
| 8. | CHAMARAJNAGAR | SBM | CHAMARAJNAGAR | 64089370405 | SBMY0040062 | 5.00 |
| 9. | GADAG | SBM | GADAG | 64089370620 | SBMY0040220 | 15.00 |
| 10. | DAKSHINA KANNADA | SBM | MANGALORE | 64089370563 | SBMY0040149 | 10.00 |
| | | | ಒಟ್ಟು | | | 300.00 |

ಈ ಸಂಬಂಧದ ವೆಚ್ಚವನ್ನು 2018-19ನೇ ಸಾಲಿನ ಲೆಕ್ಕಶೀರ್ಷಿಕೆ: 4225-01-190-0-06 (059) ರಡಿ ಪರಿಶಿಷ್ಟ ಜಾತಿಯವರ ಸ್ಮಶಾನ ಭೂಮಿ ಅಭಿವೃದ್ಧಿ ಕಾರ್ಯಕ್ರಮಕ್ಕಾಗಿ ಬಿಡುಗಡೆ ಮಾಡಿರುವ ರೂ.300.00 ಲಕ್ಷಗಳ ಅನುದಾನದಲ್ಲಿ ಭರಿಸತಕ್ಕದ್ದು.

ಆಯುಕ್ತರು,
ಸಮಾಜ ಕಲ್ಯಾಣ ಇಲಾಖೆ, ಬೆಂಗಳೂರು.

Scanned by CamScanner